**ಕರ್ನಾಟಕ ಸರ್ಕಾರ**

ಸಂಖ್ಯೆ. ಕಂಇ 465 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 10-11-2020.

## ಆದೇಶ

ಉಲ್ಲೇಖ: 1) ಮುಖ್ಯ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು ಹೊರಡಿಸಿರುವ ಆದೇಶ ಸಂಖ್ಯೆ ಕಂಇ 465 ಟಿಎನ್‌ಆರ್ 2020, ದಿನಾಂಕ: 14-10-2020 ಹಾಗು 6.11.2020.

2) ಮಾನ್ಯ ಪ್ರಧಾನ ಹಸಿರು ನ್ಯಾಯಪೀಠ, ನವದೆಹಲಿ ರವರು ದೀಪಾವಳಿ ಹಬ್ಬದ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ರಾಜ್ಯಗಳಿಗೆ ದಿನಾಂಕ: 9.11.2020 ರಂದು ನೀಡಿದ ನಿರ್ದೇಶನಗಳು.

*****

ಮಾನ್ಯ ಪ್ರಧಾನ ಹಸಿರು ನ್ಯಾಯಪೀಠ, ನವದೆಹಲಿ ದಿನಾಂಕ: 9.11.2020 ರಂದು ದೀಪಾವಳಿ ಹಬ್ಬದ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ರಾಜ್ಯ ಸರ್ಕಾರಗಳಿಗೆ ನಿರ್ದಿಷ್ಟ ಆದೇಶ ನೀಡಿರುತ್ತದೆ. ಇದರ ಅನುಸಾರ ಕರ್ನಾಟಕ ರಾಜ್ಯದಲ್ಲಿ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ಈಗಾಗಲೇ ಉಲ್ಲೇಖ (1) ರಲ್ಲಿ ಹೊರಡಿಸಿರುವ ಮಾರ್ಗಸೂಚಿಗಳ ಜೊತೆಗೆ ಅಡಕಗೊಳಿಸಿದ ಮುಂದುವರೆದ ಮಾರ್ಗಸೂಚಿಗಳನ್ನು ಹೊರಡಿಸಿದೆ. ಇವುಗಳನ್ನು ಸಂಬಂಧಿಸಿದವರು ಪಾಲನೆ ಮಾಡಲು ಸೂಚಿಸಿದೆ.

ಟಿಎಂವಿಜಯಭಾಸ್ಕರ್ 10/11/20
**(ಟಿ.ಎಂ.ವಿಜಯ್ ಭಾಸ್ಕರ್)**
**ಮುಖ್ಯ ಕಾರ್ಯದರ್ಶಿ ಹಾಗೂ**
**ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ**
**ಕಾರ್ಯಕಾರಿ ಸಮಿತಿ ಅಧ್ಯಕ್ಷರು**

ಇವರಿಗೆ:

1. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸದಸ್ಯ ಕಾರ್ಯದರ್ಶಿ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು.
4. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.

5. ಎಲ್ಲಾ ಪೋಲಿಸ್ ಆಯುಕ್ತರುಗಳು.
6. ಎಲ್ಲಾ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು.
7. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು / ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು / ತಹಶೀಲ್ದಾರ್ / ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (ಜಿಲ್ಲಾಧಿಕಾರಿಗಳ ಕಚೇರಿ ಮುಖಾಂತರ).
8. ಆಯುಕ್ತರು, ಬಿ.ಬಿ.ಎಂ.ಪಿ, ಬೆಂಗಳೂರು.
9. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ:-**

1. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ಒಳಾಡಳಿತ ಇಲಾಖೆ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, (ಪಿಸಿಎಎಸ್) ಒಳಾಡಳಿತ ಇಲಾಖೆ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಕಾನೂನು ಮತ್ತು ಸುವ್ಯವಸ್ಥೆ), ಮತ್ತು (ಪೋಲೀಸ್ ಸೇವೆಗಳು) ಇವರ ಆಪ್ತ ಸಹಾಯಕರು, ಬೆಂಗಳೂರು.

## ಸರ್ಕಾರದ ಆದೇಶ ಸಂಖ್ಯೆ. ಆರ್‌ಡಿ 465 ಟಿಎನ್‌ಆರ್ 2020, ದಿನಾಂಕ:14-10-2020

## ದೀಪಾವಳಿ ಹಬ್ಬದ ಆಚರಣೆ ಸಂಬಂಧವಾಗಿ ಮುಂದುವರೆದ ಮಾರ್ಗಸೂಚಿಗಳು

ಕರ್ನಾಟಕ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು ದಿನಾಂಕ: 14.10.2020 ಹಾಗು 6.11.2020 ರಂದು ಆದೇಶ ಹೊರಡಿಸಿ ದೀಪಾವಳಿ ಹಬ್ಬದ ಆಚರಣೆ ಸಂಬಂಧ ಮಾರ್ಗಸೂಚಿಗಳನ್ನು ಹೊರಡಿಸಿರುತ್ತಾರೆ. ಮುಂದುವರೆದಂತೆ, ದಿನಾಂಕ: 9.11.2020 ರಂದು ಮಾನ್ಯ ಪ್ರಧಾನ ಹಸಿರು ನ್ಯಾಯಪೀಠ, ನವದೆಹಲಿ ರವರು ದೀಪಾವಳಿ ಹಬ್ಬದ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ರಾಜ್ಯ ಸರ್ಕಾರಗಳಿಗೆ ನಿರ್ದಿಷ್ಟ ಆದೇಶ ನೀಡಿರುತ್ತದೆ. ಇದರನುಸಾರ ಕರ್ನಾಟಕ ರಾಜ್ಯದಲ್ಲಿ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ಈಗಾಗಲೇ ಹೊರಡಿಸಿರುವ ಮಾರ್ಗಸೂಚಿಗಳ ಜೊತೆಗೆ ಕೆಳಕಂಡ ಮುಂದುವರೆದ ಮಾರ್ಗಸೂಚಿಗಳನ್ನು ಹೊರಡಿಸಿದೆ.

ಅ) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ನವೆಂಬರ್ 2019 ರಲ್ಲಿ ವಾಯುವಿನ ಗುಣಮಟ್ಟ ಮಾಪನ ಮಾಡಿದ ವರದಿಗಳ ಪ್ರಕಾರ ರಾಜ್ಯಾದ್ಯಂತ ವಾಯು ಗುಣಮಟ್ಟವು ಉತ್ತಮ ಅಥವಾ ತೃಪ್ತಿಕರವಾಗಿದ್ದು, ಬೆಂಗಳೂರಿನ ಕೆಲವೇ ಪ್ರದೇಶಗಳಲ್ಲಿ ಮಧ್ಯಮ ಗುಣಮಟ್ಟದಾಗಿದ್ದನ್ನು ಗಮನಿಸಿ ಕರ್ನಾಟಕ ರಾಜ್ಯಾದ್ಯಂತ ಹಸಿರು ಪಟಾಕಿಗಳನ್ನು ಮಾತ್ರ ಮಾರಾಟ ಮತ್ತು ಸಿಡಿಸಲು ಅವಕಾಶ ಕಲ್ಪಿಸಲಾಗಿದೆ.

(ಆ) ಹಸಿರು ಪಟಾಕಿಗಳನ್ನು ಹಚ್ಚುವ/ಸಿಡಿಸುವ ಸಮಯ ರಾತ್ರಿ 8:00 ರಿಂದ ರಾತ್ರಿ 10:00 ಗಂಟೆಯವರೆಗೆ ಸೀಮಿತಗೊಳಿಸಿ ನಿಗಧಿಪಡಿಸಿದೆ.

(ಇ) ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ನಿರ್ದೇಶನಾಲಯ, ಬೆಂಗಳೂರು ಹಾಗು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ರಾಜ್ಯಾದ್ಯಂತ ವಾಯುವಿನ ಗುಣಮಟ್ಟ ಈ ಅವಧಿಯಲ್ಲಿ ಮಾಪನ ಮಾಡಿ ವರದಿಗಳನ್ನು ತಮ್ಮ ವೆಬ್‌ಸೈಟ್‌ಗಳಲ್ಲಿ ಪ್ರದರ್ಶಿಸತಕ್ಕದ್ದು ಹಾಗು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ, ನವದೆಹಲಿಗೆ ವರದಿಗಳನ್ನು ಕಳುಹಿಸತಕ್ಕದ್ದು.

(ಈ) ಮೇಲ್ಕಂಡ ಮಾರ್ಗಸೂಚಿಗಳು ದಿನಾಂಕ: 9.11.2020 ರ ಮಧ್ಯರಾತ್ರಿಯಿಂದ ದಿನಾಂಕ: 30.11.2020 ರ ವರೆಗೆ ಜಾರಿಯಲ್ಲಿರುತ್ತದೆ.

ಈ ಮಾರ್ಗಸೂಚಿಗಳನ್ನು ಜಿಲ್ಲೆಗಳ ಜಿಲ್ಲಾಧಿಕಾರಿಗಳು ತಮ್ಮ ಜಿಲ್ಲೆಯ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಅಗ್ನಿಶಾಮಕ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಅರಣ್ಯ ಇಲಾಖೆ ಹಾಗು ಇತರೆ ಇಲಾಖೆಗಳ/ಪ್ರಾಧಿಕಾರಗಳ ಮುಖ್ಯಸ್ಥರುಗಳನ್ನೊಳಗೊಂಡ ಸಮಿತಿ ರಚಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು.

10/11/20

(ಟಿ.ಎಂ.ವಿಜಯ್ ಭಾಸ್ಕರ್)
ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ ಅಧ್ಯಕ್ಷರು